Misc 1/2023 ಪಿ.ಡಬ್ಲ್ಯೂ: 1

ಇಂದು ದಿ:15.03.2025 ರಂದು ಸಾಕ್ಷಿಯನ್ನು ಕರೆಯಿಸಲಾಯಿತು. ಪ್ರಮಾಣ ವಚನ ಬೋಧಿಸಲಾಯಿತು.

ಪಾಟೀ ಸವಾಲು: ಎದುರುದಾರರ ಪರ ವಕೀಲರಿಂದ:

ದಿ:23.08.2019 ರಂದು ಎದುರುದಾರರಿಂದ ನಾನು ದಾವಾ ಆಸ್ತಿಯನ್ನು ನೋಂದಾಯಿತ ಖರೀದಿ ಕರಾರು ಮಾಡಿಕೊಂಡಿದ್ದೆ ಎಂದರೆ ಸರಿ. ಒ ಎಸ್ 130/2022 ಅನ್ನು ಎದುರುದಾರರು ಈ ನ್ಯಾಯಾಲಯದಲ್ಲಿ ಸಲ್ಲಿಸಿ ಸಮನ್ಸ್ ಸಹ ನನಗೆ ಬಂದಿತ್ತು ಎಂದರೆ ಬಂದಿತ್ತು, ಆದರೆ ನನಗೆ 6 ತಿಂಗಳಿನಿಂದ ಆರೋಗ್ಯ ಸರಿಯಿರಲಿಲ್ಲ ಎಂದು ಸಾಕ್ಷಿ ನುಡಿಯುತ್ತಾರೆ. ನನಗೆ 6 ತಿಂಗಳಿನಿಂದ ಪೈಲ್ಸ್ ಸಮಸ್ಯೆ ಇತ್ತು. ಅದಕ್ಕೆ ಸಂಬಂಧಪಟ್ಟಂತೆ ದಾಖಲೆ ಹಾಜರು ಮಾಡಿದ್ದೇನೆ. ಆ ದಾಖಲೆಗಳೆಂದರೆ ನಿ ಪಿ 2,3 ಮತ್ತು 5. ದಾಖಲೆಗಳ ಪ್ರಕಾರ ವೈದ್ಯರು ಕೇವಲ 10 ದಿನ ವಿಶ್ರಾಂತಿ ಪಡೆಯಿರಿ ಎಂದು ಬರೆದುಕೊಟ್ಟಿದ್ದರು ಎಂದರೆ ಸರಿ. ನನಗೆ 6 ತಿಂಗಳ ವಿಶ್ರಾಂತಿ ತೆಗೆದುಕೊಳ್ಳಬೇಕು ಎಂಬ ಬಗ್ಗೆ ದಾಖಲೆ ಹಾಜರು ಮಾಡಿಲ್ಲ ಎಂದರೆ ಸರಿ. ನಾನು ಉದ್ದೇಶಪೂರ್ವಕವಾಗಿ ಕ್ರಯಪತ್ರ ಬರೆದುಕೊಡುವುದನ್ನು ತಪ್ಪಿಸಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಎದುರುದಾರರ ತಮ್ಮನಿಗೆ ಮಾಹಿತಿ ಕೊಟ್ಟೆ ಎಂದು ಹೇಳಿದ್ದರೂ ಸಹ ಮಂಜುನಾಥನಿಗೂ ಈ ದಾವೆಗೂ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಎದುರುದಾರರು ಮತ್ತು ಮಂಜುನಾಥನಿಗೂ ಯಾವುದೇ ಸಂಬಂಧ ಇಲ್ಲದಿದ್ದರೂ ಸಹ ಅವರನ್ನು ಅನಾವಶ್ಯಕವಾಗಿ ಈ ಪ್ರಕರಣದಲ್ಲಿ ತಂದಿದ್ದೇನೆ ಎಂದರೆ ಸರಿಯಲ್ಲ. ಡಿಕ್ರಿ 2022 ರಲ್ಲಿ ಆದ ಕಾರಣ ನಿ ಪಿ 5 ಕ್ಕೂ ಅದಕ್ಕೂ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ನಾನು ಆರೋಗ್ಯವಾಗಿದ್ದರೂ ಸಹ ಎದುರುದಾರರಿಗೆ ಕ್ರಯಪತ್ರ ಮಾಡಿಕೊಡಬೇಕಾಗುತ್ತದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಹಾಕಿದಾಗ ನನಗೆ ಯಾವುದೇ ಆರೋಗ್ಯ ಸಮಸ್ಯೆ ಇಲ್ಲದಿದ್ದರೂ ಸಹ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ ಮತ್ತು ಆ ಬಗ್ಗೆ ಯಾವುದೇ ದಾಖಲೆ ಕೊಟ್ಟಿಲ್ಲ ಎಂದರೆ ದಾಖಲೆ ಕೊಟ್ಟಿಲ್ಲ ಆದರೆ ವಿಶ್ರಾಂತಿಗೆ ಹೇಳಿದ್ದರು ಎಂದು ಸಾಕ್ಷಿ ನುಡಿಯುತ್ತಾರೆ.
ಮರುವಿಚಾರಣೆ: ಇಲ್ಲ.

ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ.ಸ.ಇದೆ.
ಸಹಿ/-
ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ, ನಂಜನಗೂಡು.